ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.**

ಸಂಖ್ಯೆ.:ಸಿ7(2)ಪ್ರಾಶಿಅ/ಮಾನ್ಯತೆ ಷರತ್ತು/23/2018-19 ದಿನಾಂಕ: 30.11.2018

**: : ಸುತ್ತೋಲೆ : :**

ವಿಷಯ: ಖಾಸಗಿ ಪ್ರಾಥಮಿಕ ಶಾಲಾ ಶಿಕ್ಷಣ ಸಂಸ್ಥೆಗಳಿಗೆ ಸಂಯೋಜನೆ ಅಥವಾ ಮಾನ್ಯತೆ ನೀಡುವ ಆದೇಶಗಳಲ್ಲಿನ ಷರತ್ತುಗಳ ಬಗ್ಗೆ.

ಉಲ್ಲೇಖ: 1. ಮಾನ್ಯ ಸರ್ವೋಚ್ಚ ನ್ಯಾಯಾಲಯದ ರಿಟ್ ಪಿಟಿಷನ್ ಸಂಖ್ಯೆ:483/2014, ದಿನಾಂಕ:13-04-2009.
2. ಸರ್ಕಾರದ ಅಧಿಸೂಚನೆ ಸಂಖ್ಯೆ-3: ಇಡಿ 709 ಪಿಜಿಸಿ 2018, ದಿನಾಂಕ:07-03-2018
3. ಈ ಕಛೇರಿ ಸುತ್ತೋಲೆ ಸಂಖ್ಯೆ:ಸಿ7(2)ಪ್ರಾಶಿಅ/ಹೊಶಾನೋಂ/85/2017-18, ದಿನಾಂಕ:26-03-2018
4. ಸರ್ಕಾರದ ಆದೇಶ ಸಂಖ್ಯೆ: ಇಡಿ 587 ಪಿಜಿಸಿ 2018, ದಿನಾಂಕ:19-11-2018.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ಸರ್ವೋಚ್ಚ ನ್ಯಾಯಾಲಯವು ರಿಟ್ ಅರ್ಜಿ(ಸಿವಿಲ್) ಸಂಖ್ಯೆ:483/2004ರ ಅವಿನಾಶ್ ಮಲ್ಹೋತ್ರ ವಿರುದ್ಧ ಭಾರತ ಸರ್ಕಾರ ಪ್ರಕರಣ ಸಂಬಂಧ ದಿನಾಂಕ:13-04-2009ರ ತೀರ್ಪಿನನ್ವಯ ಹೊಸ ಖಾಸಗಿ ಶಾಲೆಗಳಿಗೆ ನೋಂದಣಿ, ಮಾನ್ಯತೆ, ಮಾನ್ಯತೆ ನವೀಕರಣ ಮತ್ತು ಸಂಯೋಜನೆ ನೀಡುವ ಪೂರ್ವದಲ್ಲಿ ಶಾಲಾ ಆಡಳಿತ ಮಂಡಳಿಗಳಿಂದ ಶಾಲಾ ಕಟ್ಟಡವನ್ನು ಭಾರತದ ರಾಷ್ಟ್ರೀಯ ಕಟ್ಟಡ ಸಂಹಿತೆಯಲ್ಲಿನ ನಿಯಮಾವಳಿಗಳನ್ವಯ ಕಟ್ಟಡದ ಸುರಕ್ಷತೆ ಕುರಿತು ಸಕ್ಷಮ ಪ್ರಾಧಿಕಾರದಿಂದ ಪಡೆದ ದೃಢೀಕರಣ ಹಾಗೂ ಅಗ್ನಿನಂದಕ ಉಪಕರಣಗಳನ್ನು ಅಳವಡಿಸಿದ್ದು, ತುರ್ತು ಪರಿಸ್ಥಿತಿಯಲ್ಲಿ ಸದರಿ ಉಪಕರಣದ ಬಳಕೆ ಕುರಿತು ತರಬೇತಿ ಪಡೆದಿರುವ ಬಗ್ಗೆ ದೃಢೀಕರಣ ಮತ್ತು ಶಾಲೆಯ ಆವರಣವು ಎಲ್ಲಾ ರೀತಿಯ ಅಗ್ನಿ ದುರಂತಗಳಿಂದ ಹಾಗೂ ವಿಷಯುಕ್ತ ಪದಾರ್ಥಗಳಿಂದ ಮುಕ್ತಿ ಹೊಂದಿರುವ ಬಗ್ಗೆ ಪರಿಶೀಲಿಸಿ ದೃಢೀಕರಿಸುವುದು ಎಂದು ಉಲ್ಲೇಖ(1)ರಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನಿರ್ದೇಶನ ನೀಡಿರುತ್ತದೆ.

ಸರ್ಕಾರವು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಹೊಸ ಖಾಸಗಿ ಪ್ರಾಥಮಿಕ ಶಾಲಾ ಶಿಕ್ಷಣ ಸಂಸ್ಥೆಗಳನ್ನು ಮಂಜೂರು ಮಾಡುವ ಆದೇಶದಲ್ಲಿ ವಿಧಿಸುತ್ತಿರುವ "ಒಂದು ವರ್ಷದೊಳಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಳ್ಳುವುದಾಗಿ ಸಂಬಂಧಪಟ್ಟ ಸಂಸ್ಥೆಯಿಂದ ಮುಚ್ಚಳಿಕೆ ಪತ್ರ ಪಡೆದು ಅನುಮತಿ ನೀಡತಕ್ಕದ್ದು" ಎಂಬ ಷರತ್ತನ್ನು ಇನ್ನು ಮುಂದೆ ಕೈಬಿಡುವಂತೆ ಮತ್ತು **"ಖಾಸಗಿ ಪ್ರಾಥಮಿಕ ಶಾಲಾ ಕಟ್ಟಡದಲ್ಲಿ ಎಲ್ಲಾ ಸುರಕ್ಷತಾ ಕ್ರಮಗಳನ್ನು ಅಳವಡಿಸಲಾಗಿದೆ ಎಂಬುದನ್ನು ಖಚಿತಪಡಿಸಿಕೊಂಡೇ ಮಾನ್ಯತೆ ನೀಡತಕ್ಕದ್ದು"** ಎಂಬ ಷರತ್ತನ್ನು ಅಳವಡಿಸುವಂತೆ ಉಲ್ಲೇಖ(4)ರ ಸರ್ಕಾರದ ಆದೇಶದಲ್ಲಿ ಉಲ್ಲೇಖಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಇಡಿ 587 ಪಿಜಿಸಿ 2018, ದಿನಾಂಕ:19-11-2018ರಲ್ಲಿ ಸೂಚಿಸಿರುವ ಎಲ್ಲಾ ಸೂಚನೆಗಳನ್ನು ಪಾಲಿಸುತ್ತಾ, ಶಾಲೆಗಳಿಗೆ ನೊಂದಣಿ, ಮಾನ್ಯತೆ, ಮಾನ್ಯತೆ ನವೀಕರಣ ಮತ್ತು ಸಂಯೋಜನೆಗೆ ಪ್ರಸ್ತಾವನೆ ಸಲ್ಲಿಸುವ ಸಂದರ್ಭದಲ್ಲಿ ಕೆಳಕಂಡ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಲಾಗಿದೆ.

(ಡಾ॥ ಪಿ.ಸಿ.ಜಾಫರ್,ಭಾ.ಆ.ಸೇ)
ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ.

**ಇವರಿಗೆ,**

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ತಾಲ್ಲೂಕು / ವಲಯಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.

ಪ್ರತಿಯನ್ನು:

1. ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಕರ್ನಾಟಕ ಸರ್ಕಾರ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ವಿಭಾಗ, ಧಾರವಾಡ ಇವರಿಗೆ ಮಾಹಿತಿಗಾಗಿ.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ ವಿಭಾಗ, ಕಲಬುರಗಿ ಇವರಿಗೆ ಮಾಹಿತಿಗಾಗಿ.
4. ಕಛೇರಿ ಪ್ರತಿ.

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಖಾಸಗಿ ಪ್ರಾಥಮಿಕ ಶಾಲಾ ಶಿಕ್ಷಣ ಸಂಸ್ಥೆಗಳಿಗೆ ಸಂಯೋಜನೆ ಅಥವಾ ಮಾನ್ಯತೆ ನೀಡುವ ಆದೇಶದಲ್ಲಿನ ಷರತ್ತುಗಳ ಬಗ್ಗೆ.

**ಓದಲಾಗಿದೆ:-** ಮಾನ್ಯ ಸರ್ವೋಚ್ಚ ನ್ಯಾಯಾಲಯದ ರಿಟ್ ಅರ್ಜಿ(ಸಿವಿಲ್) ಸಂಖ್ಯೆ:483/2004ರಲ್ಲಿನ ದಿನಾಂಕ:13-04-2009ರ ತೀರ್ಪು.

**ಪ್ರಸ್ತಾವನೆ:**

ಮಾನ್ಯ ಸರ್ವೋಚ್ಚ ನ್ಯಾಯಾಲಯವು ರಿಟ್ ಅರ್ಜಿ(ಸಿವಿಲ್) ಸಂಖ್ಯೆ:483/2004ರಲ್ಲಿನ ದಿನಾಂಕ:13-04-2009ರ ತೀರ್ಪಿನಲ್ಲಿ ಶಾಲಾ ಕಾಲೇಜುಗಳ ಕಟ್ಟಡವು ಸುರಕ್ಷಿತ ಮತ್ತು ಎಲ್ಲಾ ಕೋನಗಳಿಂದ ಸುಭದ್ರವಾಗಿದೆ ಎಂಬುದನ್ನು ಮತ್ತು ನ್ಯಾಷನಲ್ ಬಿಲ್ಡಿಂಗ್ ಕೋಡ್ ಆಫ್ ಇಂಡಿಯಾದಲ್ಲಿನ ಸುರಕ್ಷತಾ ನಿಬಂಧನೆಗಳನ್ವಯ ಕಟ್ಟಡ ನಿರ್ಮಿಸಿರುವುದನ್ನು ಮಾನ್ಯತೆ ನೀಡುವ ಮೊದಲುವ ಖಚಿತಪಡಿಸಿಕೊಳ್ಳತಕ್ಕದ್ದು ಮತ್ತು ಅಗ್ನಿಶಾಮಕ ಉಪಕರಣಗಳನ್ನು ಅಳವಡಿಸಿಕೊಳ್ಳತಕ್ಕದ್ದೆಂದು ನಿರ್ದೇಶನ ನೀಡಿದೆ. ಈ ಹಿನ್ನೆಲೆಯಲ್ಲಿ ಸರ್ಕಾರವು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಹೊಸ ಖಾಸಗಿ ಪ್ರಾಥಮಿಕ ಶಿಕ್ಷಣ ಸಂಸ್ಥೆಗಳನ್ನು ಮಂಜೂರು ಮಾಡುವ ಆದೇಶದಲ್ಲಿ ವಿಧಿಸುತ್ತಿರುವ "ಒಂದು ವರ್ಷದೊಳಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಳ್ಳುವುದಾಗಿ ಸಂಬಂಧಪಟ್ಟ ಸಂಸ್ಥೆಯಿಂದ ಮುಚ್ಚಳಿಕೆ ಪತ್ರ ಪಡೆದು ಅನುಮತಿ ನೀಡತಕ್ಕದ್ದು." ಎಂಬ ಷರತ್ತನ್ನು ಇನ್ನು ಮುಂದೆ ಕೈಬಿಡುವಂತೆ ಮತ್ತು "ಖಾಸಗಿ ಪ್ರಾಥಮಿಕ ಶಾಲಾ ಕಟ್ಟಡದಲ್ಲಿ ಎಲ್ಲಾ ಸುರಕ್ಷತಾ ಕ್ರಮಗಳನ್ನು ಅಳವಡಿಸಲಾಗಿದೆ ಎಂಬುದನ್ನು ಖಚಿತಪಡಿಸಿಕೊಂಡೇ ಮಾನ್ಯತೆ ನೀಡತಕ್ಕದ್ದು." ಎಂಬ ಷರತ್ತನ್ನು ಅಳವಡಿಸಲು ನಿರ್ಣಯಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 587 ಪಿಜಿಸಿ 2018 ಬೆಂಗಳೂರು,**
**ದಿನಾಂಕ: 19-11-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಖಾಸಗಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಮಂಜೂರು ಮಾಡುವ ಸರ್ಕಾರದ ಆದೇಶದಲ್ಲಿ "ಒಂದು ವರ್ಷದೊಳಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಳ್ಳುವುದಾಗಿ ಸಂಬಂಧಪಟ್ಟ ಸಂಸ್ಥೆಯಿಂದ ಮುಚ್ಚಳಿಕೆ ಪತ್ರ ಪಡೆದು ಅನುಮತಿ ನೀಡತಕ್ಕದ್ದು." ಎಂಬ ಷರತ್ತನ್ನು ಇನ್ನು ಮುಂದೆ ಕೈಬಿಟ್ಟು, "ಖಾಸಗಿ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಕಟ್ಟಡದಲ್ಲಿ ಎಲ್ಲಾ ಸುರಕ್ಷತಾ ಕ್ರಮಗಳನ್ನು ಅಳವಡಿಸಲಾಗಿದೆ ಎಂಬುದನ್ನು ಖಚಿತಪಡಿಸಿಕೊಂಡೇ ಮಾನ್ಯತೆ ನೀಡತಕ್ಕದ್ದು." ಎಂಬ ಷರತ್ತನ್ನು ಅಳವಡಿಸುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಎಂ.ರಾಘವೇಂದ್ರ),
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ(ಪ್ರಾಥಮಿಕ ಶಿಕ್ಷಣ).

ಇವರಿಗೆ:-

1. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ.

4. ನಿರ್ದೇಶಕರು, (ಪ್ರಾಥಮಿಕ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
5. ನಿರ್ದೇಶಕರು, (ಪ್ರೌಢ ಶಿಕ್ಷಣ) ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
6. ಎಲ್ಲಾ ಜಿಲ್ಲಾ ಉಪ ನಿರ್ದೇಶಕರುಗಳಿಗೆ.
7. ಕ್ಷೇತ್ರ ಶಿಕ್ಷಣಾಧಿಕಾರಿಗಳು (ಉಪ ನಿರ್ದೇಶಕರುಗಳ ಮುಖಾಂತರ).
8. ಶಾಖಾ ರಕ್ಷಾ ಕಡತ // ಹೆಚ್ಚುವರಿ ಪ್ರತಿಗಳು.